## 4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ತುಮಕೂರು-ಮಧುಗಿರಿ

**ಎಸ್.ಸಿ.ಸಂಖ್ಯೆ:** 5045/2024 ಫ್ರಾಸಾ-13
ಚಾಸಾ-16

ದಿನಾಂಕಃ 04-06-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

| | |
|---|---|
| **ಹೆಸರು** | ಚಂದ್ರಶೇಖರ್ |
| **ತಂದೆಯ / ಗಂಡನ ಹೆಸರು** | ಲೇಟ್ ಗಂಗಯ್ಯ |
| **ವಯಸ್ಸು** | 52 |
| **ಉದ್ಯೋಗ** | ಎ.ಎಸ್.ಐ, ಗುಬ್ಬಿ ಪೊಲೀಸ್ ಠಾಣೆ |
| **ವಾಸಸ್ಥಳ** | ಗುಬ್ಬಿ |

**<u>ಮುಖ್ಯ ವಿಚಾರಣೆ ಸರ್ಕಾರಿ ಅಭಿಯೋಜಕರಿಂದ ಃ-</u>**

**ನಾನು 2023 ರಿಂದ ಮೇ 2026 ರವರೆಗೆ ಕೊರಟಗೆರೆ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.**

ದಿ. 22.05.2024 ರಂದು ಪಿ.ಎಸ್.ಐ ರವರ ಆದೇಶದ ಮೇರೆಗೆ ರಾತ್ರಿ ಠಾಣಾಧಿಕಾರಿಯಾಗಿ ಕೊರಟಗೆರೆ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ. ರಾತ್ರಿ 10.30 ಗಂಟೆಗೆ ಪಿರ್ಯಾದಿ ಠಾಣೆಗೆ ಹಾಜರಾಗಿ ನೀಡಿದ ಬೆರಳಚ್ಚು ಮಾಡಿದ ಲಿಖಿತ ದೂರನ್ನು ಸ್ವಿಕರಿಸಿ ಠಾಣಾ ಮೊ ನಂ-155/2024 ರಲ್ಲಿ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಸಲ್ಲಿಸಿರುತ್ತೇನೆ. ನಿಪಿ-1 ಪರ್ಯಾದಿ ಮೇಲೆ ನನ್ನ ಸಹಿ ಇದೆ ಅದನ್ನು ಗುರುತಿಸುತ್ತೇನೆ ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ನ್ಯಾಯಾಲಯದಲ್ಲಿರುವ ಪ್ರಥಮ ವರ್ತಮಾನ ವರದಿ ನೋಡಿದೇನು ಅದರಲ್ಲಿ ನನ್ನ ಸಹಿ ಇರುತ್ತದೆ ಅದನ್ನು ಗುರುತಿಸುತ್ತೇನೆ. ಸದರಿ ಪ್ರಥಮ ವರ್ತಮಾನ ವರದಿಯನ್ನು ನಿಪಿ-22 ಎಂದು, ಸಾಕ್ಷಿ ಸಹಿಯನ್ನು ನಿಪಿ-22(ಎ) ಎಂದು ಗುರುತಿಸಲಾಯಿತು. ತನಿಖೆಯನ್ನು ಪಿ.ಎಸ್.ಐ ರವರಿಗೆ ವಹಿಸಿಕೊಟ್ಟಿರುತ್ತೇನೆ.

**<u>ಪಾಟೀಸವಾಲು,ಶ್ರೀ. ಕೆ.ಕೆ. ವಕೀಲರಿಂದ 2 ರಿಂದ 5 ನೇ ಆರೋಪಿತರ ಪರವಾಗಿಃ-</u>**

ಪಿರ್ಯಾದಿದಾರರು ಠಾಣೆಗೆ ಹಾಜುರಾಗಿ ಯಾವುದೇ ದೂರನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-1 ದೂರನ್ನು ನಾವೇ ಬೆರಳಚ್ಚು ಮಾಡಿ ದೂರು ದಾಖಲು ಮಾಡಿಕೊಂಡಿರುತ್ತೇವೆ ಎಂದರೆ ಸರಿಯಲ್ಲ. ಪಿರ್ಯಾದಿ ಕೊಡುವ ಸಮಯದಲ್ಲಿ ಚಾಸಾ-1 ಒಬ್ಬರೇ ಠಾಣೆಗೆ ಬಂದಿದ್ದರು. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ ಎಂದರೆ ಸರಿಯಲ್ಲ.

**ಪಾಟೀಸವಾಲು ಶ್ರೀ. ಬಿ.ಕೆ.ಪಿ.ಎಸ್. ವಕೀಲರು ಶ್ರೀ ಕೆ.ಕೆ. ವಕೀಲರು 2 ರಿಂದ 5 ನೇ ಆರೋಪಿತರ ಪರ ಮಾಡಿದ ಪಾಟೀ ಸವಾಲನ್ನು ಅಳವಡಿಸಿಕೊಳ್ಳಲು ಕೋರಿದ್ದು , ಅಳವಡಿಸಿಕೊಳ್ಳಲಾಯಿತು.**

**ಮರುವಿಚಾರಣೆ ಇಲ್ಲ.**

(ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

**ಒ ತಿ ಹೇ ಸ ಇದೆ.**

**4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ತುಮಕೂರು-ಮಧುಗಿರಿ.**